**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.884/2014**

ಪಿ.ಡಬ್ಲ್ಯೂ: 28

ಸಿ.ಡಬ್ಲ್ಯೂ: 24

ಸಾಕ್ಷಿದಾರರ ಹೆಸರು : ಲಕ್ಷ್ಮೀಶ

ತಂದೆಯ ಹೆಸರು : ಜವರಯ್ಯ

ವಯಸ್ಸು :42 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ತರೀಕೆರೆ

**ದಿನಾಂಕ: 24-08-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ**

ಈಗ್ಗೆ 6-7 ವರ್ಷಗಳ ಹಿಂದೆ ಮಧ್ಯಾಹ್ನದ ಸಮಯದಲ್ಲಿ ಪೊಲೀಸರು ನ್ಯಾಯಾಲಯದ ಮುಂದಿರುವ ಆರೋಪಿಯ ಮಾದರಿ ಸಹಿಗಳನ್ನು ಹಾಗೂ ಬರವಣಿಗೆಯನ್ನು ನನ್ನ ಸಮಕ್ಷಮ ಪಡೆದಿರುತ್ತಾರೆ. ಬ್ಯಾಂಕಿನಲ್ಲಿ ಅಡ ಇಟ್ಟಿದ್ದ ಗ್ರಾಹಕರ ಆಭರಣಗಳ ಬಗ್ಗೆ ವಂಚನೆ ಆಗಿದೆ ಎನ್ನುವ ಕಾರಣಕ್ಕೆ ಅವರ ಸಹಿಯನ್ನು ಪಡೆದಿರುತ್ತಾರೆ. ಪೊಲೀಸರು ಮಾಡಿದ ಮಹಜರಿಗೆ ನಾನು ಮತ್ತು ಚಾಸಾ-23 ಸಹಿ ಹಾಕಿರುತ್ತೇವೆ. ಸಾಕ್ಷಿಯು ನಿಪಿ-25 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-25(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-26 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಎರಡು ಪತ್ರ ಮತ್ತು ಮಾದರಿ ಸಹಿವುಳ್ಳ ಪತ್ರದಲ್ಲಿ ಆರೋಪಿ ಮತ್ತು ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪ್ರತಿಗಳನ್ನು ಕ್ರಮವಾಗಿ ನಿಪಿ-29 ರಿಂದ ನಿಪಿ-31 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ಕ್ರಮವಾಗಿ ನಿಪಿ-29(ಎ), ನಿಪಿ-30(ಎ) ಮತ್ತು ನಿಪಿ-31(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಎಂ ಕೆ ಟಿ ವಕೀಲರಿಂದ.**

ಮಹಜರ್ ಬರೆದ ದಿನಾಂಕ ಹೇಳಲಾಗುವುದಿಲ್ಲ. ಮಹಜರನ್ನು ಪೊಲೀಸ್ ಠಾಣೆಯಲ್ಲಿ ಬರೆದಿರುತ್ತಾರೆ. ಮಹಜರ್ ಸಮಯದಲ್ಲಿ ನಾನು, ಹರೀಶ, ಆರೋಪಿ ಮತ್ತು ಆರೋಪಿಯ ಮಗ ಹಾಗೂ ಇತರರು ಹಾಜರಿದ್ದೇವು. ಮಹಜರನ್ನು ಪೊಲೀಸರು ಬರೆದಿರುತ್ತಾರೆ. ಮಹಜರನ್ನು ನಾನು ಓದಿರುವುದಿಲ್ಲ ಎಂದರೆ ಸರಿ. ಪೊಲೀಸರು ತಿಳಿಸಿದ ಮೇರೆಗೆ ವಿಚಾರ ತಿಳಿದಿರುತ್ತದೆ ಎಂದರೆ ಸರಿ. ನಾನು ಪದವಿ ಓದಿರುತ್ತೇನೆ. ನಾನು ಸದರಿ ಬ್ಯಾಂಕಿನಲ್ಲಿ ಖಾತೆ ಹೊಂದಿಲ್ಲ. ಪೊಲೀಸ್ ಠಾಣೆಗೆ ದೂರು ನೀಡಲು ಹೋದಾಗ ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ನನಗೆ ಯಾವುದೇ ವಿಷಯ ಗೊತ್ತಿಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u> ಇರುವುದಿಲ್ಲ.**

*(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**